ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಶ್ರೇಯೋಭಿವೃದ್ಧಿ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

27 (12) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಹಾಸನ ಜಿಲ್ಲೆಯಲ್ಲಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು; ಯಾವ ಯಾವ ಉದ್ಯಮಗಳಲ್ಲಿ ಎಷ್ಟು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ; (ವಿವರ ನೀಡುವುದು) ರಾಜ್ಯದ ಯಾವ ಯಾವ ನಗರಗಳಲ್ಲಿ ಇ ಎಸ್ ಐ ಆಸ್ಪತ್ರೆಗಳಿವೆ; (ವಿವರ ನೀಡುವುದು)

(ಆ) ಸರ್ಕಾರವು ಕಾರ್ಮಿಕರಿಗೆ ನಿಗದಿಪಡಿಸಿರುವ ಮಾಸಿಕ ವೇತನ ಮತ್ತು ಇತರೆ ಭತ್ಯೆಗಳ ವಿವರ ನೀಡುವುದು; ಕೆಲಸ ನಿರ್ವಹಿಸುವ ಜಾಗದಲ್ಲಿ ಕಾರ್ಮಿಕರಿಗೆ ಅಪಘಾತವಾಗಿ ಅಂಗವಿಕಲತೆ ಅಥವಾ ಇತರೆ ತೊಂದರೆಗಳು ಉಂಟಾದಲ್ಲಿ ಅಂತಹ ಕಾರ್ಮಿಕರಿಗೆ ಸರ್ಕಾರ ಮತ್ತು ಉದ್ಯೋಗದಾತರು ನೀಡುವ ಪರಿಹಾರಗಳೇನು; (ವಿವರ ನೀಡುವುದು)

(ಇ) ಸರ್ಕಾರವು ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಅನುಷ್ಠಾನಗೊಳಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳ ಮಾನದಂಡಗಳೇನು; ಈ ಯೋಜನೆಗಳಡಿ ಕಳೆದೆರಡು ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಪ್ರಯೋಜನ ಪಡೆದಿರುವ ಕಾರ್ಮಿಕರ ಸಂಖ್ಯೆ ಎಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)